## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164/ಪಿಆರ್/ /2020-21 ದಿನಾಂಕ: 13-02-2021

### ವಾರ್ಡ್ ಸಮಿತಿ ಸಭೆಯ ನಡವಳಿಗಳು

**********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 13-02-2021 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ
ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಜನಾರ್ಧನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗಿರಿನಗರ) ಉಪವಿಭಾಗ |
| 3 | ಶ್ರೀಮತಿ ಶ್ವೇತಾ .ಬಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಡಾ॥ ರೇಖಾ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಶ್ರೀ ಶ್ರೀಧರ್ | ಸಹಾಯಕ ಅಭಿಯಂತರರು (ಬೆಂಗಳೂರು ಜಲ ಮಂಡಳಿ) |
| 7 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 8 | ಶ್ರೀ ಸುನಿಲ್ | ಹಿರಿ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 9 | ಶ್ರೀ ಹರೀಶ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 164 |
| 10 | ಶ್ರೀ ಕುಮಾರ್ | ಸಾರ್ವಜನಿಕರು |
| 11 | ಶ್ರೀ ಯೋಗೀಶ್ | ಸಾರ್ವಜನಿಕರು |
| 12 | ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ವಿಜಯ್‌ಕುಮಾರ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲಿಗೆ ವಾರ್ಡ್ ಸಮಿತಿಯನ್ನು ರಚಿಸಲು ತೀರ್ಮಾನಿಸಿ ಮೇಲ್ಕಂಡ ಮಾನ್ಯ ಆಯುಕ್ತರ ಆದೇಶದಲ್ಲಿ ಸೂಚಿಸಿರುವಂತೆ ವಾರ್ಡ್ ಸಮಿತಿಯನ್ನು ರಚಿಸಿ ಸಭೆಯ ಒಪ್ಪಿಗೆ ಪಡಯಲಾಗಿರುತ್ತಾರೆ.

1. ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿ ಕಂದಾಯ ವಸೂಲಾತಿಯಲ್ಲಿ ಪ್ರಗತಿ ಸಾಧಿಸಲು ಹಾಗೂ ಬಾಕಿ ಉಳಿದಿರುವ ಕಂದಾಯವನ್ನು ವಸೂಲಿ ಮಾಡಲು ಹಾಜರಿದ್ದ ಕಂದಾಯ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

2. ವಾರ್ಡ್ 164 ರಲ್ಲಿನ ರಸ್ತೆ ಗುಂಡಿಗಳ ಬಗ್ಗೆ ಚರ್ಚಿಸಲಾಗಿ ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಬೆಸ್ಕಾಂ ಇಲಾಖೆ ವತಿಯಿಂದ ಈಗಾಗಲೇ ಅಗೆದಿರುವ ರಸ್ತೆಗಳನ್ನು ಸರಿಪಡಿಸಿ ಅಗೆದಿರುವ ಹೆಚ್ಚುವರಿ ಮಣ್ಣನ್ನು ತೆರವುಗೊಳಿಸಲು ಸೂಚಿಸಲಾಗಿದೆ ಹಾಗೂ ಬೆಸ್ಕಾಂ ರವರು ಕಡಿದಿರುವ ಮರದ ಕೊಂಬೆಗಳನ್ನು ತಮ್ಮ ಇಲಾಖೆ ವತಿಯಿಂದ ತೆರವುಗೊಳಿಸಲು ತಿಳಿಸಲಾಗಿದೆ.

3. ವಾರ್ಡ್‌ನಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು ಸೂಚಿಸಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಸಾರ್ವಜನಿಕ ಸಾಮಾಜಿಕ ಅಂತರ (Social Distance) ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ ಧರಿಸುವುದರ ಬಗ್ಗೆ ಅರಿವು ಮೂಡಿಲು ಹಾಗೂ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

4. ಬೆಂಗಳೂರು ಜಲ ಮಂಡಳಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಸಭೆಯಲ್ಲಿ ತಿಳಿಸಲಾಯಿತು ಮತ್ತು ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸಲು ಸೂಚಿಸಲಾಗಿರುತ್ತದೆ.

5. ವಾರ್ಡ್ ವ್ಯಾಪ್ತಿಯಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ಗಳನ್ನು ಸ್ಥಾಪಿಸಿ ಗಂಟಲು ದ್ರವ ಪರೀಕ್ಷೆಯನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

6. ವಾರ್ಡ್ ವ್ಯಾಪ್ತಿಯ ಕೋವಿಡ್-19 ಮಾರ್ಷಲ್ ರವರು ಹಾಜರಿದ್ದು ಕೋವಿಡ್ ನಿಯಂತ್ರಣಕ್ಕೆ ಮಾರ್ಷಲ್ ರವರು ಸಾರ್ವಜನಿಕರೊಂದಿಗೆ ಒಟ್ಟುಗೂಡಿ ಮಾಸ್ಕ್ ಧರಿಸುವುದರ ಬಗ್ಗೆ ಪರಿಣಾಮಕಾರಿಯಾಗಿ ಎಚ್ಚರಿಕೆ ಮತ್ತು ಅರಿವು ಮೂಡಿಸಲು ಪ್ರಚಾರ ಮತ್ತು ಜಾಗ್ರತೆವಹಿಸುವುದಾಗಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.